# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 92 |
| ಸದಸ್ಯರ ಹೆಸರು | ಶ್ರೀ ಎಸ್.ಎಲ್.ಭೋಜೇಗೌಡ |
| ಉತ್ತರಿಸುವ ದಿನಾಂಕ | 05-07-2023 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯಲ್ಲಿಯ ಹಲವಾರು ದೇವಸ್ಥಾನಗಳ ಕಟ್ಟಡಗಳು ದುರಸ್ಥಿಯಲ್ಲಿರುವುದರಿಂದ ಇವುಗಳ ಅಭಿವೃದ್ಧಿಗೆ ನೀಡಲಾಗಿರುವ ಅನುದಾನ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಮುಜರಾಯಿ ಮತ್ತು ಖಾಸಗಿ ಧಾರ್ಮಿಕ ಸಂಸ್ಥೆಗಳ ದುರಸ್ಥಿ/ ಜೀರ್ಣೋದ್ಧಾರ/ ಅಭಿವೃದ್ಧಿ ಕಾಮಗಾರಿಗಳಿಗೆ ಸಾಮಾನ್ಯ ಅನುದಾನ ಯೋಜನೆ ಅಡಿಯಲ್ಲಿ ಅನುದಾನ ಬಿಡುಗಡೆಯಾಗಿದ್ದು, ಕಳೆದ ಎರಡು ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಮಂಜೂರಾದ ಅನುದಾನದ ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ) | ಸದರಿ ಅನುದಾನದಲ್ಲಿ ಜಿಲ್ಲೆಯ ಎಲ್ಲಾ ದೇವಸ್ಥಾನಗಳನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರವು ಈ ಸಾಲಿನಲ್ಲಿ ಮುಜರಾಯಿ ಇಲಾಖೆಯಿಂದ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ? (ಮಾಹಿತಿ ಒದಗಿಸುವುದು) | ಸಾಮಾನ್ಯ ಯೋಜನೆಯಡಿಯಲ್ಲಿ ಈ ಜಿಲ್ಲೆಗೆ 2021-22 ಹಾಗೂ 2022-23 ನೇ ಸಾಲಿಗೆ ಬಿಡುಗಡೆಯಾದ ಅನುದಾನದಲ್ಲಿ ದೇವಸ್ಥಾನಗಳ ಕಟ್ಟಡಗಳ ದುರಸ್ಥಿ/ ಜೀರ್ಣೋದ್ಧಾರ/ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br><br>ದೇವಾಲಯಗಳ ದುರಸ್ಥಿ/ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ಅವಶ್ಯವಿದ್ದಲ್ಲಿ ಆರ್ಥಿಕ ಇಲಾಖೆಯು ಆಯ-ವ್ಯಯದಲ್ಲಿ ಒದಗಿಸುವ ಅನುದಾನಕ್ಕನುಗುಣವಾಗಿ ಆಯಾ ವರ್ಷದ ಬೇಡಿಕೆಗಳನ್ನು ಪರಿಶೀಲಿಸಿ ನಿಯಮಾನುಸಾರ ಅನುದಾನ ಬಿಡುಗಡೆ ಮಾಡಲಾಗುವುದು. |

ಸಂಖ್ಯೆ: ಕಂಇ 57 ಮುಸಪ್ರ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು

ಸಂಖ್ಯೆ: ಎಲ್.ಸಿ.ಕ್ಯೂ/ಸಿಆರ್/03/2023-24

# ಅನುಬಂಧ

| ಸಾಮಾನ್ಯ ಯೋಜನೆ ಅಡಿಯಲ್ಲಿ 2021-22ನೇ ಸಾಲಿಗೆ ಧಾರ್ಮಿಕ ಸಂಸ್ಥೆಗಳ ದುರಸ್ತಿ / ಜೀರ್ಣೋದ್ಧಾರ/ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗೆಯಾದ ತಾಲ್ಲೂಕುವಾರು ಅನುದಾನದ ವಿವರ | | | | |
|---|---|---|---|---|
| ಕ್ರ.ಸಂ | ಸಾಲು | ತಾಲ್ಲೂಕು | ಸರ್ಕಾರದಿಂದ ಮಂಜೂರಾದ ಅನುದಾನ | |
| | | | ಸಂಸ್ಥೆಗಳ ಸಂಖ್ಯೆ | ರೂ ಲಕ್ಷಗಳಲ್ಲಿ |
| 1 | 2021-22 | ಚಿಕ್ಕಮಗಳೂರು | 9 | 3950000 |
| 2 | | ಮೂಡಿಗೆರೆ | 11 | 4750000 |
| 3 | | ಕೊಪ್ಪ | 5 | 850000 |
| 4 | | ಶೃಂಗೇರಿ | 0 | 0 |
| 5 | | ತರೀಕೆರೆ | 1 | 250000 |
| 6 | | ಕಡೂರು | 7 | 4000000 |
| 7 | | ಎನ್.ಆರ್.ಪುರ | 1 | 1000000 |
| 8 | | ಅಜ್ಜಂಪುರ | 1 | 1125000 |
| | | | 35 | 23575000 |

**(ಕರಡು ಪ್ರತಿ ಆಯುಕ್ತರಿಂದ ಅನುಮೋದನೆ ಗೊಂಡಿದೆ)**

ಆಯುಕ್ತರ ಪರವಾಗಿ
ಧಾರ್ಮಿಕ ದತ್ತಿ ಇಲಾಖೆ,
ಬೆಂಗಳೂರು.



Generated from eOffice by MADEV NARASANNAVAR, RD-ASS-MUZ(MN), ASSISTANT, REVENUE DEPATMENT SEC on 04/07/2023 05:30 PM